ಸಮತಾ ನುಡಿ

ಕನ್ನಡ ದಿನ ಪತ್ರಿಕೆ ಬಸವಕಲ್ಯಾಣ — ಸಾಮಾಜಿಕ ನ್ಯಾಯಕ್ಕಾಗಿ

196770

Samata Nudi Kannada Daily News Paper

PRGI No : KNKAN/25/A5209

ಸಂಪಾದಕರು : ಗುರುನಾಥ ಗಡ್ಡೆ
ಮೊ : 9739106045
email : bsuddibk@gmail.com

ಗೌರವ ಸಂಪಾದಕರು : ಸಿದ್ಧಲಿಂಗ ಗಡ್ಡೆ
ಮೊ : 9036144531

ಸಂಪುಟ : 01 ಸಂಚಿಕೆ : 204 01/11/2026, ರವಿವಾರ ⋆ VOLUME : 01 ⋆ ISSUE : 204 ⋆ PAGE : 04 ⋆ Rs. 02 ⋆ bsuddibk@gmail.com

ಕನ್ನಡ ನಾಡು ಚಂದ, ಕನ್ನಡ ನುಡಿಯು 'ಂದ

::: ಸಂಪಾದಕೀಯ :::

ರಾಜ್ಯೋತ್ಸವವನ್ನು ರಾಜ್ಯದ ತುಂಬ ಅದ್ದೂರಿಯಾಗಿ ಆಚರಿಸುವ ಸಂದರ್ಭದಲ್ಲಿ ಕರ್ನಾಟಕವು ಭೀಕರ ಬರಗಾಲವನ್ನು ಎದುರಿಸುತ್ತಿದೆ. ಈ ನಿಮಿತ್ತ ಅನೇಕ ಕಡೆ ಸರಳವಾಗಿ ನಾಡಹಬ್ಬವನ್ನು ಆಚರಿಸಲಾಗುತ್ತಿದೆ. ಮತ್ತೊಂದು ವಿಶೇಷವೆಂದರೆ ಭಾನುವಾರ ರಜಾ ದಿನದಂದು ರಾಜ್ಯೋತ್ಸವ ಬಂದಿರುವುದರಿಂದಲೂ ನಾಡಹಬ್ಬಕ್ಕೆ ಅಡಚಣೆಯಾಗುವ ಸಂದರ್ಭವಿದೆ.ಆದರೆ ಕನ್ನಡ ನೆಲ-ಜಲ-ಭಾಷೆಗಳ ವಿಷಯದಲ್ಲಿ ವಿಚಾರ ಮಾಡಿದರೆ, ನಮ್ಮ ಕರ್ನಾಟಕದ ಮೇಲೆ ನಿರಂತರವಾಗಿ ಎಲ್ಲ ರೀತಿಯಿಂದಲೂ ದಬ್ಬಾಳಿಕೆ ನಡೆಯುತ್ತಿದೆ.

ಕನ್ನಡ ಭಾಷೆಯ ಮೇಲಾಗಲಿ, ಕನ್ನಡದ ನೀರಿನ ಮೇಲಾಗಲಿ – ಕಾವೇರಿ, ಕೃಷ್ಣಾ ಹಾಗೂ ಇತ್ತೀಚಿಗೆ ನಮ್ಮ ಅರಣ್ಯ ಪ್ರದೇಶದ ಮೇಲೆ ಮತ್ತು ಬೆಂಗಳೂರಿನ ಐಟಿ ಕಂಪನಿಗಳು ಕನ್ನಡ ಭಾಷಿಕರನ್ನು ಉದ್ಯೋಗಕ್ಕೆ ಪರಿಗಣಿಸುತ್ತಿಲ್ಲ, ಅವರನ್ನು ನಿರ್ಲಕ್ಷಿಸಲಾಗುತ್ತಿದೆ ಎಂಬ ಆರೋಪವೂ ಜೋರಾಗಿ ಕೇಳಿಬರುತ್ತಿದೆ. ಈ ಎಲ್ಲ ಹಿನ್ನೆಲೆಯಲ್ಲಿ ಕರ್ನಾಟಕದ ಮೇಲೆ ನಿರಂತರವಾಗಿ ಅನ್ಯಾಯ ನಡೆಯುತ್ತಿದ್ದು, ಇದಕ್ಕೆ ನಾವೆಲ್ಲ ಕನ್ನಡಿಗರು ಒಗ್ಗಟ್ಟಾಗಿ ಒಮ್ಮನಸ್ಸಿನಿಂದ ಹೋರಾಟ ಮಾಡಬೇಕಾದ ಅನಿವಾರ್ಯತೆಯಿದೆ.

ಇತ್ತೀಚಿಗೆ ಕನ್ನಡ ಶಾಲೆಗಳ ಸ್ಥಿತಿ ಬಹಳ ಗಂಭೀರವಾಗಿದೆ. ಒಂದು

ಕಡೆ ಕನ್ನಡ ಶಾಲೆಗಳಿಗೆ ಶಿಕ್ಷಕರಿಲ್ಲ, ಮತ್ತೊಂದು ಕಡೆ ಮಕ್ಕಳನ್ನು ಕನ್ನಡ ಶಾಲೆಗೆ ಕಳಿಸುವಲ್ಲಿ ಪಾಲಕರು ನಿರ್ಲಕ್ಷ್ಯ ತೋರುತ್ತಿದ್ದಾರೆ. ಎಲ್ಲರೂ ಇಂಗ್ಲಿಷ್ ವ್ಯಾಮೋಹಕ್ಕೆ ಒಳಗಾಗಿ ಮಾತೃಭಾಷೆ ಕನ್ನಡವನ್ನು ನಿರ್ಲಕ್ಷ್ಯ ಮಾಡುವುದು ಸಲ್ಲದು. ಈ ಕುರಿತು ಸರ್ಕಾರ ಗಂಭೀರವಾಗಿ ಚಿಂತನೆ ಮಾಡಬೇಕಾದ ಕಾಲ ಇದಾಗಿದೆ. ಕನ್ನಡವೇ ಇಲ್ಲ ಎಂದ ಮೇಲೆ ಕನ್ನಡಿಗರ ಅಸ್ತಿತ್ವಕ್ಕೆ ಪ್ರಶ್ನೆ ಬರುತ್ತದೆ.

ಹಾಗಾಗಿ ಸಾಹಿತಿಗಳು, ಕಲಾವಿದರು, ಗಣ್ಯರು, ಸರ್ಕಾರದವರು ಈ ಕಡೆ ಎಂದಿಗಿಂತಲೂ ಇಂದು ಹೆಚ್ಚು ಲಕ್ಷ್ಯ ವಹಿಸಿ ಕನ್ನಡ ನೆಲ-ಜಲ-ಭಾಷೆ ಉಳಿವಿಗೆ ಪಣ ತೊಡಬೇಕಾಗಿದೆ. ಒಂದು ಕಾಲದಲ್ಲಿ ಕರ್ನಾಟಕವು ಕಾವೇರಿಯಿಂದ ಗೋದಾವರಿವರೆಗೆ ವಿಸ್ತಾರವಾದ ನಾಡಾಗಿತ್ತು.

ಕದಂಬರು, ಗಂಗರು, ಕಲ್ಯಾಣ ಚಾಲುಕ್ಯರು, ವಿಜಯನಗರ ಅರಸರು ಸೇರಿದಂತೆ ಇಲ್ಲಿ ಆಳಿದ ಅನೇಕ ರಾಜಮನೆತನಗಳ ಇತಿಹಾಸ ಬಹು ದೊಡ್ಡದು. ಒಂದು ಕಾಲಕ್ಕೆ ದಕ್ಷಿಣ ಭಾರತವನ್ನೇ ವ್ಯಾಪಿಸಿದ್ದ ಈ ಕರ್ನಾಟಕದ ನೆಲದಲ್ಲಿ ಇಂದು ನಾವು ಬಹಳಷ್ಟನ್ನು ಕಳೆದುಕೊಂಡಿದ್ದೇವೆ.

ಇದ್ದುದರಲ್ಲಿಯೂ ತೃಪ್ತಿದಾಯಕ ವಾತಾವರಣ ಇಲ್ಲ. ಕಾವೇರಿ, ಕೃಷ್ಣಾ ನದಿ ನೀರಿನ ಸಂಪೂರ್ಣ ಬಳಕೆ, ತುಂಗಭದ್ರಾ, ಬೆಣ್ಣೆತ್ತೊರೆ, ಮಾಂಜ್ರಾ ಮುಂತಾದ ಸಣ್ಣಪುಟ್ಟ ನದಿಗಳ ನೀರಿನ ಸಮಸ್ಯೆಗಳು, ಗಡಿ ತಂಟೆ ಮುಂತಾದ ವಿಷಯಗಳ ಕುರಿತು ಹೋರಾಟ ಮಾಡಬೇಕಾಗಿದೆ.ಮದ್ರಾಸ್ ಪ್ರಾಂತ್ಯ, ಮೈಸೂರು ಪ್ರಾಂತ್ಯ, ಕೊಂಕಣ ಪ್ರಾಂತ್ಯ, ಹೈದರಾಬಾದ್ ನಿಜಾಮ, ಮುಂಬೈ ಪ್ರಾಂತ್ಯದಲ್ಲಿ ಹರಿದು ಹಂಚಿಹೋದ ನಾಡನ್ನು ಒಂದುಗೂಡಿಸಿ ನಮ್ಮ ಹಿರಿಯರು ಕನ್ನಡ ಭಾಷಿಕರ ನಾಡನ್ನು ಕಟ್ಟಿದ್ದಾರೆ.

ಆದರೂ ಇದ್ದ ನಾಡನ್ನಾದರೂ ನಾವು ಉಳಿಸಿ ಬೆಳೆಸಿಕೊಂಡು, ಭಾಷೆಯನ್ನು ಮತ್ತೊಮ್ಮೆ ವಿಶ್ವ ಮಟ್ಟಕ್ಕೆ ಬೆಳೆಸುವ ಪ್ರಯತ್ನ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಇಂದಿನ ಯುವಕರಾಗಲಿ, ಪಾಲಕರಾಗಲಿ ನಾವೆಲ್ಲರೂ ಮೊದಲು ಮಾತೃಭಾಷೆ ಕನ್ನಡಕ್ಕೆ, ಕನ್ನಡ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಕರ್ನಾಟಕದಲ್ಲಿ ಇರುವವರೆಲ್ಲರೂ ಕನ್ನಡ ಕಲಿಯಬೇಕು ಎಂಬ ವಾತಾವರಣ ನಿರ್ಮಾಣ ಮಾಡುವುದು ಬಹಳ ಅವಶ್ಯವಿದೆ.

ಇನ್ನೂ ಅನೇಕ ಅಂಗಡಿ ಮುಂಗಟ್ಟುಗಳ ಮೇಲೆ ಕನ್ನಡದ ನಾಮಫಲಕಕ್ಕೆ ಆದ್ಯತೆ ನೀಡದಿರುವುದು ನಮ್ಮ ಮನಸ್ಸಿಗೆ ನೋವುಂಟು ಮಾಡುವ ಕಾರ್ಯವಾಗಿದೆ. ಇವೆಲ್ಲಕ್ಕೂ ಕಾಯ್ದೆ ಕಾನೂನುಗಳನ್ನು ರೂಪಿಸಿದರೂ ಅವು ಜಾರಿಗೆ ಬರುತ್ತಿಲ್ಲ. ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡಪರ ಸಂಘಟನೆಗಳು, ಇನ್ನಿತರ ಕನ್ನಡಿಗರು ಎಲ್ಲರೂ ಸೇರಿಕೊಂಡು ನವೆಂಬರ್ ತಿಂಗಳ ಪರ್ಯಂತ ಈ ಎಲ್ಲ ಸಮಸ್ಯೆಗಳ ಕುರಿತು ಚಿಂತನ-ಮಂಥನ ನಡೆಸಿ, ಕನ್ನಡಿಗರಲ್ಲಿ ಎಚ್ಚರ ಮೂಡಿಸಿ, ನಾವೆಲ್ಲರೂ ಗಟ್ಟಿಯಾಗಿ ನಿಂತು ಕನ್ನಡವನ್ನು ಕಟ್ಟೋಣ, ಬೆಳೆಸೋಣ.ಜೈ ಕರ್ನಾಟಕ ಮಾತೆ.

ಎಲ್ಲರಿಗೂ ರಾಜ್ಯೋತ್ಸವದ ಶುಭಾಶಯಗಳು.

ಹೈನುಗಾರರ ಹಿತಕ್ಕಾಗಿ ಹಾಲಿನ ದರ ಪರಿಷ್ಕರಣೆ: ಸಿಎಂ ಡಿ.ಕೆ. ಶಿವಕುಮಾರ

ಬೆಂಗಳೂರು: ನಮ್ಮ ಹೈನುಗಾರರ ಜೀವನೋಪಾಯವನ್ನು ರಕ್ಷಿಸುವ ಹಾಗೂ ಗ್ರಾಹಕರಿಗೆ 'ನಂದಿನಿ' ಉತ್ಪನ್ನಗಳನ್ನು ಕೈಗೆಟುಕುವ ದರದಲ್ಲಿ ಒದಗಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ ಸದಾ ಬದ್ಧವಾಗಿದೆ. ನವೆಂಬರ್ 1ರಿಂದ ಅನ್ವಯವಾಗುವಂತೆ ಪ್ರತಿ ಲೀಟರ್ ಹಾಲಿನ ದರವನ್ನು 8 ರೂ. ಹೆಚ್ಚಿಸಲಾಗಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಫೇ ನಲ್ಲಿ ಪ್ರತಿಕ್ರಿಯಿಸಿರುವ ಅವರು, ಜಾನುವಾರುಗಳ ಮೇವು ಮತ್ತು ಹಿಂಡಿ ದರದಲ್ಲಿನ ಹೆಚ್ಚಳ, ಇಂಧನ ಹಾಗೂ ಪ್ಯಾಕೇಜಿಂಗ್ ವೆಚ್ಚದ ಏರಿಕೆ ಮತ್ತು ಬರಗಾಲದ ಪರಿಣಾಮವಾಗಿ ದೈನಂದಿನ ಹಾಲಿನ ಸಂಗ್ರಹಣೆಯಲ್ಲಿ ಉಂಟಾಗಿರುವ ಕುಸಿತ ಈ ಅನಿವಾರ್ಯ ಪರಿಷ್ಕರಣೆಗೆ ಪ್ರಮುಖ ಕಾರಣಗಳಾಗಿವೆ ಎಂದು ತಿಳಿಸಿದ್ದಾರೆ. ರೈತರಿಗೆ ನೇರ ಲಾಭ:

ಈ 8 ರೂ. ಹೆಚ್ಚಳದಲ್ಲಿ 7 ರೂ. ನೇರವಾಗಿ ರೈತರಿಗೆ ತಲುಪಲಿದ್ದು, ಪ್ರತಿ ಲೀಟರ್‌ಗೆ 35 ರೂ. ನಿಂದ 42 ರೂ. ಗೆ ಏರಿಕೆಯಾಗಲಿದೆ.

ಸರ್ಕಾರ ನೀಡುವ 5 ರೂ. ಪ್ರೋತ್ಸಾಹಧನ ಸೇರಿ ರೈತರಿಗೆ ಪ್ರತಿ ಲೀಟರ್ ಹಾಲಿಗೆ 47 ರೂ. ಕೈಸೇರಲಿದೆ. ಇದರಿಂದ ದಿನಕ್ಕೆ 10 ಲೀಟರ್ ಹಾಲು ಪೂರೈಸುವ ರೈತನಿಗೆ ತಿಂಗಳಿಗೆ ಸುಮಾರು 2,100 ರೂ. ಹೆಚ್ಚುವರಿ ಆದಾಯ ದೊರೆಯಲಿದೆ.ಈ ದರ ಪರಿಷ್ಕರಣೆಯಿಂದ ರಾಜ್ಯದ ಗ್ರಾಮೀಣ ಹೈನುಗಾರರ ಕುಟುಂಬಗಳಿಗೆ ವಾರ್ಷಿಕ ಅಂದಾಜು 1,850 ಕೋಟಿ ರೂ. ನಿಂದ 2,100 ಕೋಟಿ ರೂ. ವರೆಗೆ ಹೆಚ್ಚುವರಿ ಆದಾಯ ದೊರೆಯುವ ನಿರೀಕ್ಷೆಯಿದೆ.ಕರ್ನಾಟಕದಲ್ಲಿ ಒಟ್ಟು 28.84 ಲಕ್ಷ ಹೈನುಗಾರರಿದ್ದು, ಕೆಎಂಎಫ್ ಸದಸ್ಯರಲ್ಲಿ ಶೇ.67ರಷ್ಟು ಸಣ್ಣ ಮತ್ತು ಅತಿಸಣ್ಣ ರೈತರಾಗಿದ್ದಾರೆ. ಅವರ ಪರಿಶ್ರಮಕ್ಕೆ ನ್ಯಾಯಯುತ ಪ್ರತಿಫಲ ಒದಗಿಸುವ ನಿಟ್ಟಿನಲ್ಲಿ ಈ ನಿರ್ಧಾರ ಮಹತ್ವದ ಹೆಜ್ಜೆಯಾಗಿದೆ ಎಂದು ತಿಳಿಸಿದ್ದಾರೆ. ದರ ಪರಿಷ್ಕರಣೆಯ ನಂತರವೂ ನಂದಿನಿ ಟೋನ್ಡ್ ಹಾಲಿನ ದರ ಪ್ರತಿ ಲೀಟರ್‌ಗೆ 54 ರೂ. ಇದ್ದು, ದೇಶದ ಹಲವು ಪ್ರಮುಖ ಡೈರಿ ಬ್ರ್ಯಾಂಡ್‌ಗಳಿಗಿಂ ತ ಕಡಿಮೆ ಇದೆ. ಅದೇ ರೀತಿ ನಂದಿನಿ ಶುಭಂ (4.5% ಕೊಬ್ಬಿನಾಂಶ) ಹಾಲಿನ ದರ 60 ರೂ. ಇದ್ದು, ಇತರೆ ಹತ್ತು ರಾಜ್ಯಗಳ ಸರಾಸರಿ ದರವಾದ 62.80 ರೂ. ಗಿಂತ ಕಡಿಮೆಯೇ ಇದೆ.ರೈತರ ಹಿತದ ರಕ್ಷಣೆ ಮತ್ತು ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಗುಣಮಟ್ಟದ ಹಾಲಿನ ಪೂರೈಕೆ, ಇವೆರಡಕ್ಕೂ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ.

ಭಾಲ್ಕಿ ಎಟಿಎಂ ಕಳವು ಪ್ರಕರಣ: ನಾಲ್ವರ ಬಂಧನ; ಲಕ್ಷಾಂತರ ಮೌಲ್ಯದ ಸೊತ್ತು ವಶ

ಬೀದರ್: ಭಾಲ್ಕಿಯ ಹಿರೇ ಮಠ ಸಂಸ್ಥಾನದ ಕಾಂಪ್ಲೆಕ್ಸ್ ನಲ್ಲಿರುವ ಎಟಿಎಂ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿ ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದ್ದು, 12 ಲಕ್ಷ ರೂ. ನಗದು ಸೇರಿದಂತೆ ಒಟ್ಟು 32 ಲಕ್ಷ ರೂ. ಮೌಲ್ಯದ ಸೊತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹರ್ಯಾಣ ರಾಜ್ಯದ ಆಸು (40), ಆಸಿಫ್ (25), ಅನೀಷ್ (47) ಹಾಗೂ ರಾಜಸ್ಥಾನ ರಾಜ್ಯದ ಭರತಪುರ ಜಿಲ್ಲೆಯ ರಾ ಹುಲ್ (23) ಬಂಧಿತ ಆರೋಪಿಗಳು ಎಂದು ತಿಳಿಸಿದರು. ಅ.25ರಂದು ಮಧ್ಯರಾತ್ರಿ ಭಾಲ್ಕಿಯ ಹಿರೇಮಠ ಸಂಸ್ಥಾನ ಮಠದ ಕಾಂಪ್ಲೆಕ್ಸ್ ನಲ್ಲಿರುವ ಎಟಿಎಂ ಒಳಗೆ ಪ್ರವೇಶಿಸಿದ ಕಳ್ಳರು ಗ್ಯಾಸ್ ಕಟರ್ ಬಳಸಿ 23 ಲಕ್ಷ 86 ಸಾವಿರ ರೂ. ಇರುವ ಎಟಿಎಂ ಕ್ಯಾಷೆಟ್ ಬಾಕ್ಸ್ ಕಳವು ಮಾಡಿದ್ದರು. ಪ್ರಕರಣವನ್ನು ಕೇವಲ ಐದು ದಿನಗಳಲ್ಲಿ ಭೇದಿಸಲಾಗಿದೆ ಎಂದರು. ಆರೋಪಿಗಳನ್ನು ಪತ್ತೆಹಚ್ಚಲು ನಾಲ್ಕು ತಂಡಗಳನ್ನು ರಚಿಸಲಾಗಿತ್ತು. ಎಐ ಕ್ಯಾಮೆರಾದಿಂದ ಪರಿಶೀಲಿಸಿದಾಗ ಆರೋಪಿಗಳು ತೆಲಂಗಾಣದ ಹೈದ 'ರಾ ಬಾದ್ ಗೆ ಹೋಗಿರುವುದು ಖಚಿತವಾಗಿದ್ದು, ಅ.30ರಂದು ಹೈದರಾಬಾದ್ ನ ಶಾಹಿನ್ ನಗರದಲ್ಲಿ ಅವರನ್ನು ಬಂಧಿಸಲಾ ಗಿದೆ.

ಆರೋಪಿಗಳಿಂದ 12 ಲಕ್ಷ ರೂ. ನಗದು, 20 ಲಕ್ಷ ರೂ. ಮೌಲ್ಯದ ಒಂದು ಕಾರು, ಸ್ಪ್ರೇ ಬಾಟಲ್, ಗ್ಯಾಸ್ ಕಟರ್ ಪೈಪ್, ಕಟಿಂಗ್ ಪ್ಲೇಯರ್, 2 ಮೊಬೈಲ್, 11 ವಿವಿಧ ರಾಜ್ಯಗಳ ನಂಬರ್ ಪ್ಲೇಟ್, ಗ್ಯಾಸ್ ಸಿಲಿಂಡರ್, ಆಕ್ಸಿಜನ್ ಸಿಲಿಂಡರ್ ಸೇರಿದಂತೆ ಹಲವು ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಸೋಮಶೆಟ್ಟಿಗೆ ರಾಜ್ಯೋತ್ಸವ ಪ್ರಶಸ್ತಿ: ಸಂತಸ



ಬೀದರ್: ಹಿರಿಯ ಚಿತ್ರ ಕಲಾವಿದ ಸಿ.ಬಿ. ಸೋಮಶೆಟ್ಟಿ ಅವರಿಗೆ ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದ್ದಕ್ಕೆ ಬೀದರ್ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಬಿ.ಜಿ. ಶೆಟಕಾರ್ ಸಂತಸ ವ್ಯಕ್ತಪಡಿಸಿದ್ದಾರೆ. ಸೋಮಶೆಟ್ಟಿ ಅವರು ತಮ್ಮ ಅಪೂರ್ವ ಕಲಾ ಪ್ರತಿಭೆ, ಸೃಜನಶೀಲತೆ ಹಾಗೂ ಕಲಾ ಸೇವೆಯ ಮೂಲಕ ನಾಡಿನ ಗಮನ ಸೆಳೆದಿದ್ದಾರೆ ಎಂದು ತಿಳಿಸಿದ್ದಾರೆ. ಬಸವಣ್ಣನವರ ವಿಚಾರಧಾರೆಗಳನ್ನು ಪರಿಚಯಿಸಲು ಸ್ವಂತ ಹಣದಲ್ಲಿ ಸುಂದರ ಕಲಾ ಗ್ಯಾಲರಿ ನಿರ್ಮಿಸಿದ್ದಾರೆ. ಜಿಲ್ಲೆಯ ಕೀರ್ತಿಯನ್ನು ನಾಡಿನಾದ್ಯಂತ ಬೆಳಗಿಸಿದ್ದಾರೆ ಎಂದು ಹೇಳಿದ್ದಾರೆ. ಅವರ ಕಲಾ ಸೇವೆಯನ್ನು ಗುರುತಿಸಿ ರಾಜ್ಯ ಸರ್ಕಾರ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ನೀಡಿರುವುದು ಅತ್ಯಂತ ಸೂಕ್ತವಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯದ ಗ್ರಾಮೀಣ ಸ್ಥಳೀಯ ಸಂಸ್ಥೆ ಚುನಾವಣೆ ನಡೆಯುವುದು ಶತಃಸಿದ್ಧ : ಸಚಿವ ಈಶ್ವರ ಖಂಡ್ರೆ ಘೋಷಣೆ

ಬೆಂಗಳೂರು: ರಾಜ್ಯ ಸರ್ಕಾರ ಅಧಿಕಾರ ವಿಕೇಂದ್ರೀಕರಣದ ಪರವಾಗಿದ್ದು, ಗ್ರಾಮೀಣ ಸ್ಥಳೀಯ ಸಂಸ್ಥೆ ಚುನಾವಣೆಗೆ ಕರಡು ಮೀಸಲು ಅಧಿಸೂಚನೆ ಹೊರಡಿಸಿದೆ.

ಬರುವ ಜನವರಿಯೊಳಗೆ ಜಿಲ್ಲಾ ಪಂಚಾಯತಿ ಮತ್ತು ತಾಲೂಕು ಪಂಚಾಯತಿ ಚುನಾವಣೆಗಳು ನಡೆದೇ ನಡೆಯುತ್ತವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅ.19ರವರೆಗೆ ಕರಡು ಅಧಿಸೂಚನೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಸುಮಾರು 2 ಸಾವಿರಕ್ಕೂ ಅಧಿಕ ಆಕ್ಷೇಪಣೆ ಬಂದಿದ್ದು, ಅಧಿಕಾರಿಗಳು ನಿಯಮಾನುಸಾರ ಪರಿಶೀಲನೆ ಮಾಡುತ್ತಿದ್ದು, ಶೀಘ್ರವೇ ಅಂತಿಮ ಅಧಿಸೂಚನೆ ಹೊರ'ಡಿಸಲಾಗುತ್ತದೆ ಎಂದರು.ರಾಜ್ಯ ಸರ್ಕಾರ ಪ್ರಸ್ತಾವನೆ ಸಲ್ಲಿಸಿದ ತರುವಾಯ ರಾಜ್ಯ ಚುನಾವಣೆ ಆಯೋಗ, ಕೇಂದ್ರ ಚುನಾವಣೆ ಆಯೋಗದಿಂದ ಮತದಾರರ ಪಟ್ಟಿ ಪಡೆದು ಅಥವಾ ತನ್ನಲ್ಲಿರುವ ಮತದಾರರ ಪಟ್ಟಿಯನ್ನೇ ಪರಿಷ್ಕರಿಸಿ ಚುನಾವಣೆ ನಡೆಸುವ ಕುರಿತಂತೆ ಕ್ರಮ ವಹಿಸಲಿದೆ ಎಂದರು.

ಬಹುತೇಕ ಜನವರಿ ಮೊದಲ ಅಥವಾ 2ನೇ ವಾರದಲ್ಲಿ ತಾಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆಗಳು ನಡೆಯುತ್ತವೆ. ಈ ಚುನಾವಣೆಗಳ ತರುವಾಯ ಗ್ರಾಮ ಪಂಚಾಯತಿ ಚುನಾವಣೆಗಳು ನಡೆಯಲಿವೆ ಎಂದು ಈಶ್ವರ ಖಂಡ್ರೆ ತಿಳಿಸಿದರು.



ಮಾನ್ಯ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ್ ಖಂಡ್ರೆ ರವರು ಕರ್ನಾಟಕ್ ಕಾರ್ಯನಿರತ್ ತ್ರಕರ್ತರ ಸಂಘದ ರಾಜ್ಯ ಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಶುಭ ಹಾರೈಸಿದರು

ಬಸವಕಲ್ಯಾಣ ತಾಲ್ಲೂಕು ಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ 2026 ವಿಜೇತರ ಪಟ್ಟಿ

Kannada Rajyotsava Awards 2026 • Taluk Level • Basavakalyan Taluk

Sl No	Field	Winner Name
1	Education	Sri Siddhartha Fauste
2	Music	Dr. Maruti Poojari
3	Social Service	Sharif Karimsab Patel Tripurant (Mulage)
4	Medical	Dr. Kshama T S
5	Media	Sri Virashetty Yarandagi
6	Sports	Sri Manjunath Mallikarjun
7	Literature	Sri Mallikarjun
8	Yoga	Sri Jayaprakash
9	Kannada Movement	Sri Rajkumar M Mudabir
10	Organization	Sri Ujwala Suryavamshi Sirgur
11	Folklore	Sri Arjun Belle Basavakalyan
12	Others	Smt. Changunabai Tadal Tanda

Order by: Sri Ramesh S
Executive Officer, Taluk Panchayat, Basavakalyan

1st November 2026